19

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನಿರುದ್ಯೋಗಿಗಳಿಗೆ "ಐರಾವತ" ಯೋಜನೆಯಡಿಯಲ್ಲಿ ಪ್ರವಾಸಿ ಟ್ಯಾಕ್ಸಿಗಳನ್ನು ಒದಗಿಸುವ ಬಗ್ಗೆ

ಓದಲಾಗಿದೆ: 2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-79 ಮತ್ತು 85ರಂತೆ

*****

**ಪ್ರಸ್ತಾವನೆ:**

2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ 5000 ಯುವಕ/ಯುವತಿಯರಿಗೆ ಸಾಮಾಜಿಕ ಉದ್ಯಮಶೀಲತಾ ಯೋಜನೆ ಅಡಿ ಸರ್ಕಾರಿ ಮತ್ತು ಖಾಸಗಿ ಬ್ರಾಂಡೆಂಡ್ ಸಂಸ್ಥೆಗಳ ಸಹಯೋಗದೊಂದಿಗೆ ಆದಾಯ ತರುವ ಆರ್ಥಿಕ ಚಟುವಟಿಕೆಗಳನ್ನು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪ್ರಾರಂಭಿಸಲು ಸರ್ಕಾರದಿಂದ ಗರಿಷ್ಠ ರೂ.10.00 ಲಕ್ಷ ಆರ್ಥಿಕ ನೆರವನ್ನು ನೀಡಲಾಗುವುದೆಂದು ಘೋಷಿಸಲಾಗಿದೆ. ಅದೇ ರೀತಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ನೆರವಾಗಲು ಪ್ರವಾಸೋದ್ಯಮ, ಸಾರಿಗೆ ಕೆ.ಎಂ.ಎಫ್., ಇತ್ಯಾಧಿ ಇಲಾಖೆಗಳ ಸಹಯೋಗದೊಂದಿಗೆ ಟ್ಯಾಕ್ಸಿ, ಹೋಂ ಸ್ಟೇ ಇತರ ಸ್ವಯಂ ಉದ್ಯೋಗಗಳನ್ನು ಕೈಗೊಳ್ಳಲು ತರಬೇತಿ ನೀಡಲಾಗುವುದೆಂದು ಘೋಷಿಸಲಾಗಿದೆ.

ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಇತರ ನಿಗಮಗಳಿಂದ ಸಾಮಾಜಿಕ ಉದ್ಯಮಶೀಲತಾ ಯೋಜನೆ ಅಡಿಯಲ್ಲಿ ಪ್ರವಾಸಿ ಟ್ಯಾಕ್ಸಿ ನೀಡಲು "ಐರಾವತ" ಯೋಜನೆ ಎಂದು ಪರಿಗಣಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳಲ್ಲಿ ಈಗಾಗಲೇ ಜಾರಿಯಲ್ಲಿರುವ ಸ್ವಯಂ ಉದ್ಯೋಗ, (ಐ.ಎಸ್.ಬಿ) ಯೋಜನೆ ಅಡಿಯಲ್ಲಿರುವಂತೆ ಪ್ರವಾಸಿ ಟ್ಯಾಕ್ಸಿಗಳಿಗೆ ಸಹ ಶೇ.50% ಅಥವಾ ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲು ಮತ್ತು ಅಗತ್ಯವಿರುವ ಉಳಿದ ಮೊತ್ತವನ್ನು ಫಲಾನುಭವಿಗಳು, ಬ್ಯಾಂಕ್/ಹಣಕಾಸು ಸಂಸ್ಥೆ ಭರಿಸುವ ಮೂಲಕ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಕೋರಿರುತ್ತಾರೆ.

ಪ್ರಸ್ತಾಪಿತ "ಐರಾವತ" ಯೋಜನೆ ಅಡಿಯಲ್ಲಿ ಈಗಾಗಲೇ ಪ್ರವಾಸಿ ಟ್ಯಾಕ್ಸಿಗಳನ್ನು ನಡೆಸಲಾಗುತ್ತಿರುವ ಉಬರ್ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ಮೇಲ್ಕಂಡ ನಿಗಮಗಳಿಗೆ ಅನುಮತಿ ನೀಡಲಾಗಿರುತ್ತದೆ. ಪ್ರಸ್ತುತ ಉಬರ್ ಸಂಸ್ಥೆ ಬೆಂಗಳೂರು, ಮಂಗಳೂರು, ಮೈಸೂರು, ಹುಬ್ಬಳ್ಳಿ , ಧಾರವಾಡ ನಗರಗಳಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಅದೇ ರೀತಿಯಲ್ಲಿಯೇ ಓಲಾ, ಇತ್ಯಾದಿ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿರುವ ಅಥವಾ ಕಾರ್ಯ ನಿರ್ವಹಿಸುವ ಇತರ ನಗರ ಪ್ರದೇಶಗಳಲ್ಲಿ ಸಹ ಎಂ.ಓ.ಯು. (ಒಡಂಬಡಿಕೆ) ಮಾಡಿಕೊಳ್ಳುವುದು. ಸದರಿ ಸಂಸ್ಥೆಗಳು ಇಲ್ಲದೇ ಇರುವ ಇತರ ನಗರ/ ಗ್ರಾಮೀಣ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಟ್ಯಾಕ್ಸಿಗಳನ್ನು ಖರೀದಿಸಲು ಪ್ರತ್ಯೇಕವಾಗಿ ಆರ್ಥಿಕ ನೆರವು ನೀಡಲಾಗುವುದು.

ಮೇಲ್ಕಂಡ ವಿಷಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಸರ್ಕಾರ ಆದೇಶ ಹೊರಡಿಸಿದೆ.

***ಸರ್ಕಾರಿ ಆದೇಶ ಸಂಖ್ಯೆ: ಸಕಇ 353 ಎಸ್‌ಡಿಸಿ 2018 (2), ಬೆಂಗಳೂರು, ದಿನಾಂಕ:25-10-2018***

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ "ಐರಾವತ ಯೋಜನೆ" ಅಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ನಿರುದ್ಯೋಗಿ ಯುವಕ/ಯುವತಿಯರಿಗೆ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ,

ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರವು ಆದೇಶಿಸಿದೆ.

ಷರತ್ತುಗಳು:

(1) ಓಲಾ/ಉಬರ್ ಸಂಸ್ಥೆಗಳು ಪ್ರಸ್ತುತ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಬಳ್ಳಾರಿ ಮತ್ತು ಮಂಗಳೂರು ನಗರಗಳಲ್ಲಿ ಟ್ಯಾಕ್ಸಿ ಸೇವೆಯನ್ನು ಒದಗಿಸುತ್ತಿದ್ದು, ಸದರಿ ನಗರಗಳಲ್ಲಿ ಈ ಸಂಸ್ಥೆಗಳ ಫ್ಲಾಟ್‌ಫಾರಂ ಮೂಲಕ ಟ್ಯಾಕ್ಸಿ ಸೇವೆಯನ್ನು ಒದಗಿಸಲು ಇಚ್ಛಿಸಿರುವ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಇವರು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವುದು. ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂದಿಸಿದಂತೆ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಇವರು ಅರ್ಜಿಗಳನ್ನು ಆಹ್ವಾನಿಸುವುದು.

(2) ಈ ಯೋಜನೆಯಡಿಯಲ್ಲಿ ಭೌತಿಕ ಮತ್ತು ಆರ್ಥಿಕ ಗುರಿಗಳನ್ನು ಪ್ರತ್ಯೇಕವಾಗಿ ನಿಗದಿಪಡಿಸಲಾಗುವುದು (ವಿವೇಚನಾ ಕೋಟಾ ಸೇರಿದಂತೆ).

(3) ಅಭ್ಯರ್ಥಿಗಳ ಅರ್ಹತೆ:-

(ಅ) ಅರ್ಜಿದಾರರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜಾತಿಗಳಿಗೆ ಸೇರಿರಬೇಕು.

(ಆ) ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಈ ಯೋಜನೆ ಅಡಿಯಲ್ಲಿ ರಾಜ್ಯದ ಯಾವುದೇ ಜಿಲ್ಲೆಯಲ್ಲಿರುವ ಅಭ್ಯರ್ಥಿಗಳು ಉಬರ್/ಓಲಾ ಮತ್ತು ಇತರ ಸಂಸ್ಥೆಗಳ ಮೂಲಕ ಆಯ್ದ ನಗರಗಳಲ್ಲಿ ಟ್ಯಾಕ್ಸಿ ಸೇವೆ ನೀಡಲು ಇಚ್ಛಿಸುವವರು ಅರ್ಜಿ ಸಲ್ಲಿಸುವುದು.

(ಇ) ವಯಸ್ಸು ಕನಿಷ್ಠ 21 ವರ್ಷಗಳು, ಗರಿಷ್ಠ 50 ವರ್ಷಗಳು

(ಈ) ಲಘು/ಭಾರಿ ವಾಹನ ಚಾಲನಾ ಪರವಾನಗಿ ಹೊಂದಿರಬೇಕು.

(ಉ) ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ರೂ.5.00 ಲಕ್ಷಗಳ ಮಿತಿಯೊಳಗಿರತಕ್ಕದ್ದು.

(ಊ) ಕಳೆದ 3. ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ನಿಗಮಗಳಿಂದ ವಿವಿಧ ಯೋಜನೆಗಳಡಿಯಲ್ಲಿ ರೂ.1.00 ಲಕ್ಷಕ್ಕಿಂತ ಮೇಲ್ಪಟ್ಟ ಸಹಾಯಧನ/ಸಾಲ ಪಡೆದವರು ಈ ಯೋಜನೆ ಅಡಿ ಸೌಲಭ್ಯ ಪಡೆಯಲು ಅರ್ಹರಲ್ಲ.

(ಋ) ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಯೋಜನೆ ಅಡಿ ಸೌಲಭ್ಯ ಪಡೆದವರು ಈ ಯೋಜನೆ ಅಡಿ ಸೌಲಭ್ಯ ಪಡೆಯಲು ಅರ್ಹರಲ್ಲ.

(4) ಸಹಾಯಧನ/ಸಾಲ:-

(ಅ) ಈ ಯೋಜನೆ ಅಡಿ ಸರ್ಕಾರದಿಂದ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಘಟಕ ವೆಚ್ಚವದಲ್ಲಿ ಶೇ.50% ಅಥವಾ ಗರಿಷ್ಠ ರೂ:5.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುವುದು.

(ಆ) ಘಟಕ ವೆಚ್ಚದ ಉಳಿದ ಮೊತ್ತವನ್ನು ಬ್ಯಾಂಕು/ಹಣಕಾಸು ಸಂಸ್ಥೆ ಅಥವಾ ಫಲಾನುಭವಿಗಳಿಂದ ಭರಿಸತಕ್ಕದ್ದು.

(ಇ) ಆಯ್ಕೆಯಾದ ಫಲಾನುಭವಿಗಳು ಸಾಲ ಪಡೆಯುವ ಸಲುವಾಗಿ ಮತ್ತು ನಿಗಮಗಳಿಂದ ಸಹಾಯಧನ ಬಿಡುಗಡೆ ಮಾಡುವ ಬಗ್ಗೆ ಈಗಾಗಲೇ ಜಾರಿಯಲ್ಲಿರುವ ವಿಧಾನಗಳನ್ನು ಅನುಸರಿಸುವುದು.

(5) ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ:-

(ಅ) ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಕರೆದು ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಈ ಕೆಳಕಂಡ ಮಾನದಂಡಗಳ ಆಧಾರದ ಮೇಲೆ ಫಲಾನುಭವಿಗಳನ್ನು ಆಯ್ಕೆ ಮಾಡುವುದು.

(i) ಟ್ಯಾಕ್ಸಿ ಚಾಲನೆಯಲ್ಲಿ ಅನುಭವ ಹೊಂದಿರುವ ಅಭ್ಯರ್ಥಿಗಳಗೆ ಪ್ರತಿ ವರ್ಷ ಅನುಭವಕ್ಕೆ 2 ಅಂಕಗಳನ್ನು ನೀಡಿ, ಅನುಭವದ ಮೇಲೆ ಹೆಚ್ಚಿನ ಅಂಕಗಳನ್ನು ಪಡೆದವರನ್ನು ಆಯ್ಕೆ ಮಾಡುವುದು (ಪ್ರಾದೇಶಿಕ ಸಾರಿಗೆ ಅಧಿಕಾರಿ (ಆರ್.ಟಿ.ಒ) ಗಳಿಂದ ಲೈಸೆನ್ಸ್ ಪಡೆದ ದಿನಾಂಕದಿಂದ ಅನುಭವವನ್ನು ಪರಿಗಣಿಸುವುದು). ಆದರೆ, ಬ್ಯಾಡ್ಜ್ ಹೊಂದಿರುವವರಿಗೆ ಆದ್ಯತೆಯನ್ನು ನೀಡುವುದು.

(ii) ಒಂದು ವೇಳೆ ಒಬ್ಬರಿಗಿಂತ ಮೇಲ್ಪಟ್ಟು ಫಲಾನುಭವಿಗಳು ಸಮಾನ ಅಂಕಗಳನ್ನು ಪಡೆದಲ್ಲಿ, ವಯಸ್ಸಿನ ಹಿರಿತನದ ಮೇಲೆ ಆಯ್ಕೆ ಮಾಡುವುದು.

(iii) ನಿಗದಿಪಡಿಸಿದ ಗುರಿಯಲ್ಲಿ ಕನಿಷ್ಠ ಶೇ.10 ರಷ್ಟನ್ನು ಮಹಿಳಾ ಅಭ್ಯರ್ಥಿಗಳಗೆ ಕಾಯ್ದಿರಿಸುವುದು. ಒಂದು ವೇಳೆ ಮಹಿಳಾ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಪುರುಷ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು.

(iv) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅಂತರ್‌ಜಾತಿ ವಿವಾಹವಾಗಿದ್ದು, ನೋಂದಣಿ ಮಾಡಿಕೊಂಡಿರುವವರಿಗೆ ಆದ್ಯತೆ ನೀಡಲಾಗುವುದು.

(v) ಉಬರ್/ ಓಲಾ ಇತರೆ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿರುವ ನಗರಗಳ ನಿವಾಸಿಗಳು ಅರ್ಹರಿದ್ದಲ್ಲಿ, ಅಂತಹವರಿಗೆ ನಿಗಧಿಪಡಿಸಿದ ಗುರಿಯೊಳಗೆ ಆದ್ಯತೆ ನೀಡುವುದು. ಗುರಿಯಂತೆ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಕ್ಕ ಪಕ್ಕದ ಜಿಲ್ಲೆಗಳ ಅಭ್ಯರ್ಥಿಗಳನ್ನು ಪರಿಗಣಿಸುವುದು.

(6) ಇತರ ಷರತ್ತುಗಳು:

(i) ಆಯ್ಕೆಯಾದ ಫಲಾನುಭವಿಗಳಗೆ ಓಲಾ/ಉಬರ್ ಮತ್ತು ಇತರೆ ಸಂಸ್ಥೆಗಳ ಫ್ಲಾಟ್‌ಫಾರಂದಲ್ಲಿ ಅಗತ್ಯ ತರಬೇತಿ ನೀಡಲು ಆಯಾ ನಿಗಮಗಳಿಂದ ವ್ಯವಸ್ಥೆ ಮಾಡುವುದು.

(ii) ಯಶಸ್ವಿಯಾಗಿ ತರಬೇತಿ ಬಗ್ಗೆ ದೃಢೀಕರಣ ಪತ್ರ ಪಡೆದ ನಂತರವೇ ಅಂತಿಮ ಮಂಜೂರಾತಿ ಪತ್ರವನ್ನು ನೀಡಿ ಸಹಾಯ ಧನವನ್ನು ನೀಡುವುದು.

(iii) ಆಯ್ಕೆಯಾದ ಅಭ್ಯರ್ಥಿಗಳು ಕನಿಷ್ಠ ಒಂದು ವರ್ಷದ ಅವಧಿಗೆ ಕಡ್ಡಾಯವಾಗಿ ಓಲಾ/ಉಬರ್ ಇತರೆ ಸಂಸ್ಥೆಗಳ ಫ್ಲಾಟ್‌ಫಾರಂಗಳ ಮೂಲಕ ಸೇವೆ ಸಲ್ಲಿಸತಕ್ಕದ್ದು.

(iv) ಫಲಾನುಭವಿಗಳು ನಿಗಮಗಳಿಂದ ಪಡೆದಿರುವ ಟ್ಯಾಕ್ಸಿಗಳನ್ನು ಮೂರು ವರ್ಷಗಳೊಳಗೆ ಪರಭಾರೆ ಮಾಡತಕ್ಕದ್ದಲ್ಲ.

ಪರಿಶಿಷ್ಟ ಜಾತಿ ಅಭ್ಯರ್ಥಿಗಳಗೆ ಸಂಬಂಧಿಸಿದಂತೆ, ವ್ಯವಸ್ಥಾಪಕ ನಿರ್ದೇಶಕರುಗಳು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿಯಮಿತ, ಇವರು ಮೇಲ್ಕಂಡ ಮಾನದಂಡಗಳಂತೆ ಅರ್ಹ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಿ ಆಯ್ಕೆಯನ್ನು ಅಂತಿಮಗೊಳಸಿ ಯೋಜನೆಯನ್ನು ಅನುಷ್ಠಾನಗೊಳಸುವುದು.

(16)

ಪರಿಶಿಷ್ಟ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಇವರು ಮೇಲ್ಕಂಡ ಮಾನದಂಡಗಳಂತೆ ಅರ್ಹ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಿ ಆಯ್ಕೆಯನ್ನು ಅಂತಿಮಗೊಳಿಸಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.

ಸಫಾಯಿ ಕರ್ಮಚಾರಿಗಳು ಅರ್ಜಿ ಸಲ್ಲಿಸಿ ಅರ್ಹತೆ ಹೊಂದಿದ್ದಲ್ಲಿ ಅಂತಹವರಿಗೆ ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದಿಂದ ಈ ಯೋಜನೆಯಡಿ ಸಹಾಯಧನ ನೀಡಲಾಗುವುದು.

ಮೇಲ್ಕಂಡ ಯೋಜನೆಗೆ ಪ್ರಸ್ತಾಪಿಸಿದ ವೆಚ್ಚವನ್ನು 2018-19ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ 2225-01-796-0-02 (ವಿವಿಧ ಅಭಿವೃದ್ಧಿ ಯೋಜನೆಯಡಿ) ಹಾಗೂ 4225-01-796-0-01 (ವಿವಿಧ ಅಭಿವೃದ್ಧಿ ಯೋಜನೆ) ಒದಗಿಸಿದ ಅನುದಾನದಿಂದ ಭರಿಸುವುದು. ಅದೇ ರೀತಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ 2225-02-794-0-05 ( ವಿವಿಧ ಅಭಿವೃದ್ಧಿ ಯೋಜನೆಯಡಿ) ಹಾಗೂ 4225-02-794-0-01 (ವಿವಿಧ ಅಭಿವೃದ್ಧಿ ಯೋಜನೆ) ಒದಗಿಸಿದ ಅನುದಾನದಿಂದ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 678 ವೆಚ್ಚ-3/2018 ದಿನಾಂಕ: 12-10-2018ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಬಿ. ಪ್ರಕಾಶ್) 2/11/2018
ಸರ್ಕಾರದ ಉಪ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಗೆ:-

1) ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು
4) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ,
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ,
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ ನಿಯಮಿತ,
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿಯಮಿತ
8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ ನಿಯಮಿತ
9) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿಗಳು:

1) ಸಮಾಜ ಕಲ್ಯಾಣ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು
3) ಸರ್ಕಾರದ ಜಂಟಿ/ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ
4) ಸರ್ಕಾರದ ಅಧೀನ ಕಾರ್ಯದರ್ಶಿ-1, 2 & 3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ

39

(12)

ಕರ್ನಾಟಕ ಸರ್ಕಾರ

ಸಂಖ್ಯೆ:ಸಕಇ 353 ಎಸ್‌ಡಿಸಿ 2018 (2)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:22.02.2019.

## ತಿದ್ದುಪಡಿ

ಸರ್ಕಾರಿ ಆದೇಶ ಸಂಖ್ಯೆ: ಸಕಇ 353 ಎಸ್‌ಡಿಸಿ 2018 (2), ದಿನಾಂಕ: 25.10.2018 ಆದೇಶ ಭಾಗದ ಷರತ್ತಿನ ಕ್ರಮ ಸಂಖ್ಯೆ 4 (ಅ) ಈ ಕೆಳಕಂಡಂತಿರುತ್ತದೆ.

(4) ಸಹಾಯಧನ/ಸಾಲ:-

"(ಅ) ಈ ಯೋಜನೆ ಅಡಿ ಸರ್ಕಾರದಿಂದ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಘಟಕ ವೆಚ್ಚದಲ್ಲಿ ಶೇ.50% ಅಥವಾ ಗರಿಷ್ಟ ರೂ.5.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುವುದು."

ಸದರಿ ಷರತ್ತನ್ನು ಈ ಕೆಳಕಂಡಂತೆ ತಿದ್ದಿ ಓದಿಕೊಳ್ಳತಕ್ಕದ್ದು.

"ಈ ಯೋಜನೆ ಅಡಿ ಸರ್ಕಾರದಿಂದ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಘಟಕ ವೆಚ್ಚದಲ್ಲಿ ಗರಿಷ್ಟ ರೂ.5.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುವುದು."

MD-8800
23/2/19

ಕರ್ನಾಟಕದ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲಕರು (ಎ & ಇ ಲೆಕ್ಕ ಪರಿಶೋಧನೆ-1, 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ, ಬೆಂಗಳೂರು.
7. ವಿಶೇಷಾಧಿಕಾರಿ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ ನಿಯಮಿತ
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಗಳು:**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.
3. ಸರ್ಕಾರದ ಜಂಟಿ / ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ
4. ಸರ್ಕಾರದ ಅಧೀನ ಕಾರ್ಯದರ್ಶಿ-1, 2 & 3ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನಿರುದ್ಯೋಗಿಗಳಿಗೆ ಸಾಮಾಜಿಕ ಉದ್ಯಮಶೀಲತಾ ಯೋಜನೆಯಡಿಯಲ್ಲಿ "ಸಮೃದ್ಧಿ" ಉಪಯೋಜನೆಯಡಿಯಲ್ಲಿ ಆರ್ಥಿಕ ನೆರವು ನೀಡುವ ಬಗ್ಗೆ

ಓದಲಾಗಿದೆ: 2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-79 ಮತ್ತು 85ರಂತೆ

*****

**ಪ್ರಸ್ತಾವನೆ:**

2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-79ರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ 5000 ಯುವಕ/ಯುವತಿಯರಿಗೆ ಸಾಮಾಜಿಕ ಉದ್ಯಮಶೀಲತಾ ಯೋಜನೆ ಅಡಿ ಸರ್ಕಾರಿ ಮತ್ತು ಖಾಸಗಿ ಬ್ರ್ಯಾಂಡೆಂಡ್ ಸಂಸ್ಥೆಗಳ ಸಹಯೋಗದೊಂದಿಗೆ ಆದಾಯ ತರುವ ಆರ್ಥಿಕ ಚಟುವಟಿಕೆಗಳನ್ನು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪ್ರಾರಂಭಿಸಲು ಸರ್ಕಾರದಿಂದ ಗರಿಷ್ಠ ರೂ.10.00 ಲಕ್ಷ ಆರ್ಥಿಕ ನೆರವನ್ನು ನೀಡಲಾಗುವುದೆಂದು ಘೋಷಿಸಲಾಗಿದೆ.

ಅದೇ ರೀತಿ ಆಯವ್ಯಯ ಭಾಷಣದ ಕಂಡಿಕೆ-85ರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ನೆರವಾಗಲು ಪ್ರವಾಸೋದ್ಯಮ, ಸಾರಿಗೆ ಕೆ.ಎಂ.ಎಫ್., ಇತ್ಯಾಧಿ ಇಲಾಖೆಗಳ ಸಹಯೋಗದೊಂದಿಗೆ ಟ್ಯಾಕ್ಸಿ, ಹೋಂ ಸ್ಟೇ ಇತರ ಸ್ವಯಂ ಉದ್ಯೋಗಗಳನ್ನು ಕೈಗೊಳ್ಳಲು ತರಬೇತಿ ನೀಡಲಾಗುವುದೆಂದು ಘೋಷಿಸಲಾಗಿದೆ.

ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಇತರ ನಿಗಮಗಳಿಂದ ಸಾಮಾಜಿಕ ಉದ್ಯಮಶೀಲತಾ ಯೋಜನೆಯಲ್ಲಿ 'ಸಮೃದ್ಧಿ ಯೋಜನೆ' ಎಂಬ ಉಪಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ಆರ್ಥಿಕ ನೆರವು ನೀಡಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸದರಿ ನಿಗಮಗಳು ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಆಯವ್ಯಯದ ಭಾಷಣದ ಕಂಡಿಕೆ-79ರಲ್ಲಿ ಘೋಷಿಸಿರುವಂತೆ, ರೂ.10.00 ಲಕ್ಷಗಳವರೆಗೆ ಸಹಾಯಧನದ ರೂಪದಲ್ಲಿ ಅನುದಾನ ನೀಡಲು ಮತ್ತು ಸದರಿ ಅಭ್ಯರ್ಥಿಗಳಿಗೆ ಅನುದಾನ ನೀಡುವ ಮುಂಚೆ ವ್ಯಾಪಾರ ಚಟುವಟಿಕೆಗಳನ್ನು ನಡೆಸುವ ಬಗ್ಗೆ ಪ್ರಾಥಮಿಕ ತರಬೇತಿಗಳನ್ನು ಸಹ ನೀಡಲು ಪ್ರಸ್ತಾಪಿಸಲಾಗಿದೆ.

ಮೇಲ್ಕಂಡ ವಿಷಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಸರ್ಕಾರದ ಆದೇಶ ಹೊರಡಿಸಲು ನಿರ್ಧರಿಸಲಾಗಿದೆ.

***ಸರ್ಕಾರಿ ಆದೇಶ ಸಂಖ್ಯೆ: ಸಕಇ 353 ಎಸ್‌ಡಿಸಿ 2018 (1), ಬೆಂಗಳೂರು, ದಿನಾಂಕ:25-10-2018***

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, "ಸಮೃದ್ಧಿ ಯೋಜನೆ" ಅಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ನಿರುದ್ಯೋಗಿ ಯುವಕ/ಯುವತಿಯರಿಗೆ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಕರ್ನಾಟಕ

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರವು ಆದೇಶಿಸಿದೆ.

ಷರತ್ತುಗಳು:

1) ಸಮೃದ್ಧಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ/ಪಂಗಡದ ನಿರುದ್ಯೋಗಿಗಳಿಗೆ ಆದಾಯ ಬರುವಂತಹ ಆರ್ಥಿಕ ಚಟುವಟಿಕೆಗಳನ್ನು ಕೈಗೆತ್ತಿಕೊಳ್ಳಲು ವಿವಿಧ ಸಂಸ್ಥೆಗಳೊಂದಿಗೆ ಮಾರುಕಟ್ಟೆ/ತಾಂತ್ರಿಕ ಬೆಂಬಲ ಪಡೆಯಲು ಎಂ.ಓ.ಯು (ಒಡಂಬಡಿಕೆ) ಮಾಡಿಕೊಂಡು ಫಲಾನುಭವಿಗಳು ಸ್ವಯಂ ಉದ್ಯೋಗ ಘಟಕಗಳನ್ನು ಸ್ಥಾಪಿಸುವ ಮೂಲಕ ಉದ್ಯಮದಾರರಾಗಲು ಆರ್ಥಿಕ ನೆರವನ್ನು ನೀಡುವುದು. ಬ್ರಾಂಡೆಡ್ ಸಂಸ್ಥೆಗಳ ಸಹಯೋಗದೊಂದಿಗೆ ಸಮೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.

2) ಮಳಿಗೆ ಸ್ಥಾಪಿಸಲು ಸೂಕ್ತ ಸ್ಥಳವನ್ನು ಫಲಾನುಭವಿಗಳೇ ಒದಗಿಸಿಕೊಳ್ಳತಕ್ಕದ್ದು ಮತ್ತು ಸ್ಥಳ ಹೊಂದಿದವರಿಗೆ ಆಧ್ಯತೆ ನೀಡುವುದು.

3) ಸಹಾಯಧನ:- ಸಮೃದ್ಧಿ ಯೋಜನೆ ಅಡಿಯಲ್ಲಿ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಅನುದಾನ ರೂಪದಲ್ಲಿ ರೂ.10.00 ಲಕ್ಷದವರೆಗೆ ಅಥವಾ ಆರ್ಥಿಕ ಚಟುವಟಿಕೆಗಳಿಗೆ ಅವಶ್ಯವಾಗುವ ಘಟಕದ ವೆಚ್ಚ, ಇದರಲ್ಲಿ ಯಾವುದು ಕಡಿಮೆಯೋ, ಅದನ್ನು ಧನಸಹಾಯದ ರೂಪದಲ್ಲಿ ನೀಡಿ ಅನುಷ್ಠಾನಗೊಳಿಸುವುದು. (ಸಾಲದ ಭಾಗ ಇರುವುದಿಲ್ಲ).

4) ಆಯ್ಕೆಯಾದ ಫಲಾನುಭವಿಗಳಿಗೆ ಬ್ರಾಂಡೆಡ್ ಸಂಸ್ಥೆಗಳೊಂದಿಗೆ ಅಗತ್ಯ ತರಬೇತಿ ನೀಡಲು ಆಯಾ ನಿಗಮಗಳಿಂದ ಸೂಕ್ತ ವ್ಯವಸ್ಥೆ ಮಾಡುವುದು. ಸಮೃದ್ಧಿ ಯೋಜನೆಯಡಿಯಲ್ಲಿ ಎಂ.ಓ.ಯು (ಒಡಂಬಡಿಕೆ) ಮಾಡಿಕೊಳ್ಳುವ ಸಂಸ್ಥೆಗಳಿಂದ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ವ್ಯಾಪಾರ ನಡೆಸಲು ಪ್ರಾಥಮಿಕ ಹಂತದ ತರಬೇತಿಯನ್ನು ನೀಡಿ ಯಶಸ್ವಿಯಾಗಿ ತರಬೇತಿ ಪೂರ್ಣಗೊಳಿಸಿ ದೃಢೀಕರಣ ಪತ್ರ ಪಡೆದ ನಂತರವೇ ಮಂಜೂರಾತಿ ನೀಡಿ ಆರ್ಥಿಕ ನೆರವನ್ನು ನೀಡುವುದು.

5) ಈ ಯೋಜನೆಯನ್ನು ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿರುವ ಡಾ। ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಹಾಗೂ ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮಗಳ ಮೂಲಕ ಅನುಷ್ಠಾನಗೊಳಿಸುವುದು. ಅನುದಾನದ ಲಭ್ಯತೆ ಮೇರೆಗೆ ಭೌತಿಕ ಮತ್ತು ಆರ್ಥಿಕ ಗುರಿಗಳನ್ನು (ವಿವೇಚನಾ ಕೋಟಾ ಸೇರಿದಂತೆ) ಪ್ರತ್ಯೇಕವಾಗಿ ನಿಗದಿಪಡಿಸಲಾಗುವುದು.

6) ಒಟ್ಟು ಗುರಿಯಲ್ಲಿ ನಿಯಮಾನುಸಾರ ಮಹಿಳಾ ಅಭ್ಯರ್ಥಿಗಳನ್ನು ಮತ್ತು ವಿಕಲಚೇತನ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು. ಒಂದು ವೇಳೆ ಈ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ, ಪುರುಷ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು. ಅಂತರ್ಜಾತಿ ವಿವಾಹವಾದ ಪ್ರಕರಣಗಳಿಗೆ ಆದ್ಯತೆ ನೀಡುವುದು.

7) ಅಭ್ಯರ್ಥಿಗಳ ಅರ್ಹತೆ:-

(ಅ) ಅರ್ಜಿದಾರರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜಾತಿಗಳಿಗೆ ಸೇರಿರಬೇಕು.

(ಆ) ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

43

(12)

(ಇ) ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿರಬೇಕು.

(ಈ)ವಯಸ್ಸು ಕನಿಷ್ಠ 21 ವರ್ಷಗಳು, ಗರಿಷ್ಠ 50 ವರ್ಷಗಳು

(ಉ)ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ರೂ.5.00 ಲಕ್ಷಗಳ ಮಿತಿಯೊಳಗಿರತಕ್ಕದ್ದು.

(ಊ)ಕಳೆದ 3 ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ನಿಗಮಗಳಿಂದ ವಿವಿಧ ಯೋಜನೆಗಳಡಿಯಲ್ಲಿ ರೂ.1.00 ಲಕ್ಷಕ್ಕಿಂತ ಮೇಲ್ಪಟ್ಟ ಸಹಾಯಧನ/ಸಾಲ ಪಡೆದವರು ಈ ಯೋಜನೆ ಅಡಿ ಸೌಲಭ್ಯ ಪಡೆಯಲು ಅರ್ಹರಲ್ಲ.

8) ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ:-

ಹೆಚ್ಚಿನ ವಿದ್ಯಾರ್ಹತೆ ಮತ್ತು ವಯೋಮಾನವನ್ನು ಆಧರಿಸಿ ಜೇಷ್ಠತಾ ಪಟ್ಟಿ ಸಿದ್ಧಪಡಿಸಿ, ಅದರಂತೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು. ಮಳಿಗೆಗಳನ್ನು ನಡೆಸಲು ಸ್ವಂತ/ಬಾಡಿಗೆ ಸ್ಥಳ ಹೊಂದಿರುವವರಿಗೆ ಆದ್ಯತೆ ನೀಡುವುದು.

9) ಇತರೆ ಷರತ್ತುಗಳು:

(i) ಆಯ್ಕೆಯಾದ ಅಭ್ಯರ್ಥಿಗಳು ಯೋಜನೆ ಷರತ್ತುಗಳನ್ವಯ ಮಳಿಗೆಗಳನ್ನು ನಡೆಸತಕ್ಕದ್ದು.

(ii) ಸಮೃದ್ಧಿ ಯೋಜನೆ ಅಡಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವುದು ಮತ್ತು ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಇವರು ಇತರ ನಿಗಮಗಳ ಪರವಾಗಿ ಈ ಬಗ್ಗೆ ಸಮನ್ವಯಾಧಿಕಾರಿಯಾಗಿ ಕಾರ್ಯನಿರ್ವಹಿಸತಕ್ಕದ್ದು. ಮೇಲ್ಕಂಡ ಮಾನದಂಡಗಳಂತೆ ಅರ್ಹ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಿ ನಿಗದಿತ ಗುರಿಯಂತೆ ಆಯ್ಕೆ ಮಾಡಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.

ಮೇಲ್ಕಂಡ ಯೋಜನೆಗೆ ಪ್ರಸ್ತಾಪಿಸಿದ ವೆಚ್ಚವನ್ನು 2018-19ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ:2225-01-796-0-02 (ವಿವಿಧ ಅಭಿವೃದ್ಧಿ ಯೋಜನೆಯಡಿ) ಹಾಗೂ 4225-01-796-0-01 (ವಿವಿಧ ಅಭಿವೃದ್ಧಿ ಯೋಜನೆ) ಒದಗಿಸಿದ ಅನುದಾನದಿಂದ ಭರಿಸುವುದು. ಅದೇ ರೀತಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ:2225-02-794-0-05 (ವಿವಿಧ ಅಭಿವೃದ್ಧಿ ಯೋಜನೆಯಡಿ) ಹಾಗೂ 4225-02-794-0-01 (ವಿವಿಧ ಅಭಿವೃದ್ಧಿ ಯೋಜನೆ) ಒದಗಿಸಿದ ಅನುದಾನದಿಂದ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 678 ವೆಚ್ಚ-3/2018 ದಿನಾಂಕ: 12-10-2018ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಬಿ. ಪ್ರಕಾಶ್)
ಸರ್ಕಾರದ ಉಪ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಗೆ:-

1) ಮಹಾಲೇಖಪಾಲರು, (ಎ&ಇ. ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪರಿಶಿಷ್ಟ ಜಾತಿ/ಪಂಗಡ ಮತ್ತು ಇತರೆ ಪ್ರತಿಭಾವಂತ ಆಸಕ್ತ ನವೋದ್ಯಮಿಗಳಿಗೆ ಸ್ಟಾರ್ಟ್‌ಅಪ್ ನೀತಿಯಡಿ ಐಡಿಯಾ2ಪಿಓಸಿ ದಲ್ಲಿ "ಉನ್ನತಿ ಯೋಜನೆ" ಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಏಕಕಡತ ಸಂಖ್ಯೆ:ಅಂಅನಿ/ಕೈ &ತ/ ಉನ್ನತಿ-12/2018-19 ದಿನಾಂಕ:26-12-2018

*****

**ಪ್ರಸ್ತಾವನೆ:-**

ಕರ್ನಾಟಕ ಸರ್ಕಾರದ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸ್ಟಾರ್ಟ್‌ಅಪ್ ನೀತಿಯಡಿ ಐಡಿಯಾ2ಪಿ.ಓ.ಸಿ (Idea2Poc) ಯೋಜನೆ ರೀತಿಯಲ್ಲಿ ಎಸ್.ಸಿ/ಎಸ್.ಟಿ ಮತ್ತು ಇತರೆ ಪ್ರತಿಭಾವಂತ ಆಸಕ್ತ ನವೋದ್ಯಮಿಗಳಿಗೆ ಉನ್ನತಿ ಯೋಜನೆ ಜಾರಿಗೊಳಿಸಿ, ತಂತ್ರಜ್ಞಾನದ ಆವಿಷ್ಕಾರಗಳೊಂದಿಗೆ ನೂತನವಾಗಿ ಆರಂಭಿಸುವ ಪರಿಶಿಷ್ಟ ಜಾತಿ/ವರ್ಗ ಮತ್ತು ಇತರೆ ಸ್ಟಾರ್ಟ್‌ಅಪ್ ಉದ್ಯಮಿಗಳಿಗೆ ಆರಂಭಿಕ ಆರ್ಥಿಕ ಸಮಸ್ಯೆಗಳನ್ನು ನಿಭಾಯಿಸಲು ಅನುಕೂಲವಾಗುವಂತೆ ರೂ.50.00 ಲಕ್ಷಗಳವರೆಗೆ ಅನುದಾನವನ್ನು ಮಂಜೂರು ಮಾಡಬಹುದೆಂದು ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ಇವರು ಮೇಲೆ ಓದಲಾದ ಏಕ ಕಡತದಲ್ಲಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಸರ್ಕಾರದ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 412 ಎಸ್‌ಡಿಸಿ 2018, ಬೆಂಗಳೂರು, ದಿನಾಂಕ:12.02.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಉನ್ನತಿ ಯೋಜನೆ - ಸ್ಟಾರ್ಟ್‌ಅಪ್ (ಐಡಿಯಾ2ಪಿ.ಓ.ಸಿ (Idea2Poc) ಯೋಜನೆಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ.

1) ಉನ್ನತಿ ಯೋಜನೆ ಅನುಷ್ಠಾನದ ಮಾರ್ಗಸೂಚನೆಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ. ಅದರಂತೆ ಯೋಜನೆಯನ್ನು ಅನುಷ್ಠಾನಗೊಳಿಸುವುದು.

2) ಇದಕ್ಕೆ ತಗಲುವ ವೆಚ್ಚವನ್ನು ಸಮಾಜ ಕಲ್ಯಾಣ ಇಲಾಖೆಯ ವಿವಿಧ ಕಾರ್ಯಕ್ರಮಗಳಡಿ ಹಂಚಿಕೆಯಾಗಿರುವ ಲೆಕ್ಕಶೀರ್ಷಿಕೆ 2225-01-796-0-02 ಹಾಗೂ 2225-02-794-0-05 ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 05 ಟಿಎಫ್‌ಪಿ 2018, ದಿನಾಂಕ: 05-04-2018ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ-2

ANNEXURE-1

# GOVERNMENT OF KARANTAKA
# SOCIAL WELFARE DEPARTMENT

## GUIDELINES FOR UNNATI SCHEME

---

### I. Feature of the Unnati Scheme in brief:-

On the same pattern of The Scheme of idea 2 poc of ITBT & Science and Technology Department, the Social Welfare Department, Government of Karnataka aims to provide a comprehensive entrepreneurship platform for SC/ST start-ups and others having innovative idea of social impact under the scheme called "Unnati". The objective of the Schemes is to encourage innovators who may need early stage funding to stimulate commercialisation of their innovations and to help in validating proor of concept (idea 2 poc).

### II. Support under the Scheme:-

1. The funding support offered by the Social Welfare Department under this scheme is in the form of grant-in-aid.
2. The funding level is up to Rs.50 lakhs as one time grant. If the startup has already received financial support either from GOK or GOI or any other Government agency entity is not eligible to receive fund under this scheme.
3. The funding is provided over a period of 2 years in instalments against agreed milestones. Proposed project duration cannot exceed 2 years.
4. The fund disbursement is milestone based and is released in instalments based on achievement of project milestones.
5. Scheme Implementation Partner is Dr.B.R.Ambedkar Development Corporation/Dr.Babu Jagaveevan Ram Development Corporation/Karnataka Thanda Development Corporation/Karnataka Bhovi Development Corporation/ Karnataka Adi jambava Development Corporation/Karnataka Safayi Karmachari Development Corporation/Karnataka Maharshi Valmiki ST Development Corporation, and will be herein after referred to as Implementation Partner (IP).

III. Eligibility for technology for innovations:

- The applicants shall be SC/ST or non-SC/ST.
- The applicants from SC/ST may takeup innovations in any of the subjects/fields.
- The applicants form non-SC/ST may takeup innovations in any of the subjects/fields having social impact particularly helpful for the SC/ST and other weaker sections.
- Startups with an innovative technology based idea/solution and applicant shall be a startup asper definition of startup policy of Government of Karnataka.
- The applicant should be the registered entity such as Pvt Ltd/OPC, LLP/Partnership, and Proprietorship in Karnataka state.
- At least 50% of qualified workforce beonging in to Karnataka State should be engaged.
- The members/founders of startup shall be SC/ST or non-SC/ST. But in case of non-SC/ST atleaast one of the members/co-founders shall be SC/ST holding minimum of 50% share/ownership. The SC/ST member/co-founder shall continue to be a part of the business for a period of minimum of 2 years after receipt of the fund. The terms and condition of ownership should not be altered to the disadvantage of SC/ST members/co-founder during the course of business.
- For BT start-ups: The startup must own functional in-house R&D facilities that are adequate to implement the project. If the startup does not have a functional and adequate laboratory or facility of its won then on selection for the Idea2Poc Grant assistance, it shall get incubated at an incubator (in biotech are like BBC/CCAMP/IISC) with functional and adequate laboratory facilities.
- Every proposal must clearly identify a Project Leader who will take responsibility for the technical and managerial aspects of the project execution. In the event that the proposal is shortlisted for Presentation before EC and the same Project Leader will be required to present the case for support. In the event that proposal is shortlisted for funding support, then the Project Leader will be required to sign the project agreement.

## IV. Idea2POC Process:-

**Call for Proposals from SC/ST and Non-SC/ST Entreprenuers by the concerned Corporations (IPs) under Social Welfare Department:**

- Applications may be invited for Idea2POC every year in January and July in the normal circumstances.
- The Applications have to be filed on-line within 30 days from the date of calling of Applications.
- The applications shall be screened for data sufficiency/eligibility by the concerned Corporations (IPs) and forward the same to the Evaluation Committee (EC).
- Further, after approval by the Evaluation Committee the Eligible applications shall be forwarded to Approval Committee (AC) for final approval.

## V. Screening Process:

- **Stage 1:** Pre-Screening for Eligibility and Data Sufficiency by the concerned/Knowledge Partners, EY and assigned the collated scores and submit the same to EC.
- **Stage 2:** First round of presentations by the Startups before the Evaluation Committee headed by Principal Secretary for Social Welfare Department and forword the same with recommendation to AC.
- **Stage 3:** Second Round of Presentations by the Startups, if necessary before the Approval Committee and the final approval may be accorded.

## VI. Disbursal of Funds:

- Any disbursement of funds will be started after the approval of the Project by AC.
- The fund will be distributed in instalments or as decided by the Approval Committee.

## VII. Identification of Innovations with Social Impact by non SC/ST

- Any disbursement of funds will be done after evaluating the impact of the product/solution, on the welfare of the SC/ST and other Weaker Sections.

(5)

## VIII. Unnati Evaluation Committee/ Unnati Approval Committee

The following are the EC and AC.

**Unnati Evaluation Committee**

| Sl No | Designation | Department | Capacity |
|---|---|---|---|
| 1 | Principal Secretary, | Social Welfare Department. | Chairman |
| 2 | Managing Director | Dr. Ambedkar Development Corporation and other Corporations/ | Member Secretary |
| 3 | Managing Director | Karnataka Maharishi Valmiki Development Corporation | Member Secretary |
| 4 | President | The Industry Entrepreneurship - TiE | Member |
| 5 | Naganand | VC - Idea Spring Capital | Member |
| 6 | Prashanth | VC - Accel Partners | Member |
| 7 | Ravi Gururaj | Founder and CEO QikPod | Member |
| 8 | Director | NASSCOM | Member |
| 9 | Knowledge partners | EY | Member |
| 10 | Senior Manager | Startup Cell, Department of IT/BT | Member |

**Unnati Approval Committee**

| Sl No | Designation | Department | Capacity |
|---|---|---|---|
| 1 | Hon'ble Minister | Social Welfare Department | Chairman |
| 2 | Principal Secretary | Social Welfare Department | Member |
| 3 | Advisor | Social Welfare Department | Member |
| 4 | Principal Secretary | IT & BT Department | Member |
| 5 | Commissioner | Social Welfare | Member |
| 6 | Managing Director | Dr. Ambedkar Development Corporation and other Corporations. | Member Secretary |
| 7 | Managing Director | Karnataka Maharishi Valmiki Development Corporation | Member Secretary |
| 8 | Knowledge partners | EY and/or any other experts | Member |

## IX Monitoring and Review Process:

- MOU will be entered into with the startup - Idea2POC Enterprenuers and the concerned Corporations (IPs) after obtaining approval from the Approval Committee.
- Transfer the fund to the statups as per the approval of the Approval Committee after collecting ID Proof, Opening of no- Lien Bank Account.
- Assign Mentors/Subject matter Expert to each startup - Idea2POC By IPc
- Periodical progress report shall be obtained by the MDs of Corporations from startups.
- It is the responsibility of Corporations IPc to ensure that the funds are utilised for the purpose for which the fund is released.
- The Startups shall submit fund Utilisation Certificate to the MDs of Corporations/IPs along with audited financial Statements and same is to be placed before the Evaluation Committee.

*****

53

(2)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರಿಗೆ "ಸ್ವಯಂ ಉದ್ಯೋಗ" ಬ್ಯಾಂಕ್ ಲಿಂಕ್ಡ್ ಯೋಜನೆಗಳಿಗೆ ಸಹಾಯಧನವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ: ಸಕಇ 91 ಎಸ್‌ಡಿಸಿ 2014, ಬೆಂಗಳೂರು. ದಿನಾಂಕ: 20-06-2014.

2) ಏಕಕಡತ ಸಂಖ್ಯೆ: ಅಂಅನಿ / ಕೈ&ತ / ಐಎಸ್‌ಬಿ / ಸ.ಉ/ 08. 2015-16, ದಿನಾಂಕ:21.10.2015.

ಪ್ರಸ್ತಾವನೆ:-

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:20-06-2014ರ ಆದೇಶದಲ್ಲಿ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ. ನಿಯಮಿತಗಳಿಂದ 2014-15ನೇ ಸಾಲಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಾಲವನ್ನು ಬ್ಯಾಂಕುಗಳಿಂದ ಪಡೆಯಲು ಅನುಕೂಲವಾಗುವಂತೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳಿಂದ ಘಟಕ ವೆಚ್ಚ ರೂ.1.00 ಲಕ್ಷಗಳಿಗೆ ಮೀರಿದ ಪ್ರಕರಣಗಳಲ್ಲಿ ಮಾತ್ರ ಸಹಾಯಧನ ಗರಿಷ್ಠ ಮಿತಿಯನ್ನು ರೂ.1.00 ಲಕ್ಷಗಳಿಂದ ರೂ.2.00 ಲಕ್ಷಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಏಕಕಡತದಲ್ಲಿ ಗಂಗಾ ಕಲ್ಯಾಣ ಯೋಜನೆ, ಭೂ ಒಡೆತನ ಮತ್ತು ಮೈಕ್ರೋ ಕ್ರೆಡಿಟ್/ಮೈಕ್ರೋ ಫೈನಾನ್ಸ್ (ರೂ.25,000/- ವರೆಗೆ) ನೇರ ಸಾಲ ನೀಡಲಾಗುತ್ತಿದೆ. ಉಳಿದ ಸ್ವಯಂ ಉದ್ಯೋಗ ಚಟುವಟಿಕೆಗಳಿಗೆ ಸರ್ಕಾರದಿಂದ ಸಹಾಯದನ ಮತ್ತು ಬ್ಯಾಂಕ್‌ಗಳಿಂದ ಸಾಲ ನೀಡಲಾಗುತ್ತಿದೆ. ಆದರೆ ಪ್ರಸ್ತುತ ಸಹಾಯಧನ ಘಟಕ ವೆಚ್ಚ ರೂ.1.00 ಲಕ್ಷದವರೆಗೆ ಇದ್ದಲ್ಲಿ ಶೇ.50 ಪ್ರತಿಶತ ನೀಡಲಾಗುತ್ತದೆ ಮತ್ತು ಘಟಕ ವೆಚ್ಚ ರೂ.1.00 ಲಕ್ಷ ಮೀರಿದಲ್ಲಿ ಸಹಾಯಧನ ಶೇ.33% ಅಥವಾ ರೂ.2.00 ಲಕ್ಷದವರೆಗೆ ಸೀಮಿತಗೊಳಿಸಲಾಗಿದೆ. ಇದರಿಂದ ಬ್ಯಾಂಕ್‌ಗಳು ಹೆಚ್ಚಿನ ಸಂಖ್ಯೆಯಲ್ಲಿ ಸಾಲ ನೀಡಲು ಮುಂದಾಗುತ್ತಿಲ್ಲ. ಆದ್ದರಿಂದ ಬ್ಯಾಂಕ್ ಸಾಲ ಪಡೆಯಲು ಸಹಾಯಧನವನ್ನು ಹೆಚ್ಚಿಸುವುದು ಸೂಕ್ತವೆಂದು ಭಾವಿಸಿ, ಸ್ವಯಂ ಉದ್ಯೋಗ, ಬ್ಯಾಂಕ್ ಸಾಲ ಲಿಂಕ್ಡ್ ಯೋಜನೆಗಳಿಗೆ ಸಹಾಯಧನವನ್ನು ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

| ಸ್ವಯಂ ಉದ್ಯೋಗ ಯೋಜನೆ | ಸಹಾಯಧನ | ಷರಾ |
|---|---|---|
| ಘಟಕ ವೆಚ್ಚ ರೂ.1.00 ಲಕ್ಷದಿಂದ ರೂ.5.00 ಲಕ್ಷಗಳವರೆಗೆ | 70% ಅಥವಾ ಗರಿಷ್ಠ ರೂ.3.50 ಲಕ್ಷ | ಉಳಿದ ಮೊತ್ತ ಬ್ಯಾಂಕ್ ಸಾಲ |
| ಘಟಕ ವೆಚ್ಚ ರೂ.5.00 ಲಕ್ಷಗಳಿಂದ ರೂ.10.00 ಲಕ್ಷಗಳವರೆಗೆ | 60% ಅಥವಾ ಗರಿಷ್ಠ ರೂ.5.00 ಲಕ್ಷ | ಉಳಿದ ಮೊತ್ತ ಬ್ಯಾಂಕ್ ಸಾಲ |
| ಘಟಕ ವೆಚ್ಚ ರೂ.10.00 ಲಕ್ಷಗಳಿಂದ ರೂ.20.00 ಲಕ್ಷಗಳವರೆಗೆ | 50% ಅಥವಾ ಗರಿಷ್ಠ ರೂ.5.00 ಲಕ್ಷ | ಉಳಿದ ಮೊತ್ತ ಬ್ಯಾಂಕ್ ಸಾಲ |

-1588 29/3/16

-2457 3/3/2016

ಅದರಂತೆ, ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 394 ಎಸ್‌ಡಿಸಿ 2015,**
**ಬೆಂಗಳೂರು, ದಿನಾಂಕ:16/03/2015.**

Cognizance has to be issued

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರಿಗೆ ಸ್ವಯಂ ಉದ್ಯೋಗ, ಬ್ಯಾಂಕ್ ಲಿಂಕ್ಡ್ ಯೋಜನೆಗಳಿಗೆ ಘಟಕ ವೆಚ್ಚ ರೂ.1.00 ಲಕ್ಷಗಳಿಗೆ

ಮು.ತಿ.ನೋ

ADM 21-03-16

Please put up

ಮೀರಿದ ಪ್ರಕರಣಗಳಲ್ಲಿ ಮಾತ್ರ 2015-16ನೇ ಸಾಲಿನಿಂದ ಪ್ರಸ್ತುತ ಇರುವ ಸಹಾಯಧನವನ್ನು ರೂ.2.00 ಲಕ್ಷದ ರೂ.5.00 ಲಕ್ಷ (ರೂ. ಎರಡು ಲಕ್ಷಗಳಿಂದ ರೂ. ಐದು ಲಕ್ಷಗಳಿಗೆ ಮಾತ್ರ) ಗಳಿಗೆ ಹೆಚ್ಚಿಸಿ, ಈ ಕೆಳಕಂಡ ಷರತ್ತುಗೊಳಪಡಿಸಿ ಆದೇಶಿಸಲಾಗಿದೆ.

ಷರತ್ತುಗಳು:

1) ಮೇಲ್ಕಂಡ ಸಹಾಯಧನ ಬ್ಯಾಂಕ್ ಸಾಲ ಲಿಂಕ್ಡ್ ಸ್ವಯಂ ಉದ್ಯೋಗ ಯೋಜನೆಗಳಿಗೆ ಮಾತ್ರ ಅನ್ವಯಿಸುತ್ತದೆ.
2) ಶೇ.33% ಗುರಿಯನ್ನು ಮಹಿಳೆಯರಿಗೆ ಮೀಸಲಿಡುವುದು.
3) ಶೇ.3% ರಷ್ಟು ಗುರಿಯನ್ನು ವಿಕಲಚೇತನರಿಗೆ ಮೀಸಲಿಡುವುದು.
4) ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಸ್ವಯಂ ಉದ್ಯೋಗದಡಿ ಅವಕಾಶ ನೀಡುವುದು.
5) ಈ ಯೋಜನೆಗಳಡಿಯಲ್ಲಿ ಅವಕಾಶ ಪಡೆದ ಫಲಾನುಭವಿಗಳು ಮತ್ತೆ 5 ವರ್ಷಗಳವರೆಗೆ ಯಾವುದೇ ಸೌಲಭ್ಯ ಪಡೆಯಲು ಮೀಸಲಿಡುವುದು.
6) ಶೇ.3% ರಷ್ಟು ಗುರಿಯನ್ನು ವಿಕಲಚೇತನರಿಗೆ ಮೀಸಲಿಡುವುದು.
7) ಈ ಯೋಜನೆಯ ಸೌಲಭ್ಯ ಪಡೆಯಲು ಗ್ರಾಮಾಂತರ ಪ್ರದೇಶದ ಫಲಾನುಭವಿಗಳ ವಾರ್ಷಿಕ ಆದಾಯ ರೂ.1.50 ಲಕ್ಷ ಮತ್ತು ನಗರ ಪ್ರದೇಶದಲ್ಲಿ ರೂ.2.00 ಲಕ್ಷ ಮೀರಬಾರದು.
8) ಕೃಷಿಯೇತರ ಸ್ವಯಂ ಉದ್ಯೋಗ ಚಟುವಟಿಕೆಗಳಿಗೆ ಫಲಾಪೇಕ್ಷಿತಗಳ ವಯೋಮಿತಿ ಕನಿಷ್ಠ 21 ವರ್ಷಗಳು ಮತ್ತು ಗರಿಷ್ಠ 50 ವರ್ಷಗಳ ಒಳಗಿರಬೇಕು.
9) ಕೃಷಿ ಮತ್ತು ಕೃಷಿ ಆದಾರಿತ ಚಟುವಟಿಕೆಗಳಿಗೆ ಫಲಾಪೇಕ್ಷಿತಗಳ ವಯೋಮಿತಿ ಕನಿಷ್ಠ 21 ವರ್ಷಗಳು ಮತ್ತು ಗರಿಷ್ಠ 60 ವರ್ಷಗಳ ಒಳಗಿರಬೇಕು.

ಈ ಆದೇಶವು ದಿನಾಂಕ:01-04-2016 ರಿಂದ ಜಾರಿಗೆ ತರಲಾಗಿದೆ. ಹಾಗೂ ಇದಕ್ಕೆ ತಗಲುವ ವೆಚ್ಚವನ್ನು 2015-16ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಜಾತಿಗೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ 2225-01-800-0-19, 2225-01-190-2-01 ಹಾಗೂ ಪರಿಶಿಷ್ಟ ಪಂಗಡಕ್ಕೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ 2225-02-800-0-06 ರಲ್ಲಿ ನಿಗಮಗಳಿಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 1121 ವೆಚ್ಚ-3/2016, ದಿನಾಂಕ:17-02-2016ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಕೆ.ವಿ. ರಾಮು)
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.

**ಪ್ರತಿಯನ್ನು:**

1) ಮಹಾಲೇಖಪಾಲರು(ಎ ಮತ್ತು ಇ), ಕರ್ನಾಟಕ ಸರ್ಕಾರ, ಬೆಂಗಳೂರು
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂ.
6) ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3 & 9), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
9) ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
10) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಕರ್ನಾಟಕ ಸರ್ಕಾರ.

ಸಂಖ್ಯೆ: ಸಕಇ 394 ಎಸ್‌ಡಿಸಿ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:13-07-2016.

## ತಿದ್ದುಪಡಿ ಆದೇಶ

ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ/ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಜನರಿಗೆ ಸ್ವಯಂ ಉದ್ಯೋಗ ಬ್ಯಾಂಕ್ ಲಿಂಕ್ಡ್ ಯೋಜನೆಗಳಿಗೆ ಸಹಾಯಧನ ಹೆಚ್ಚಿಸುವ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಸಕಇ 394 ಎಸ್‌ಡಿಸಿ 2015, ದಿನಾಂಕ:16-03-2015 ಮತ್ತು 31-03-2016ರ ಆದೇಶ ಭಾಗದಲ್ಲಿ ಷರತ್ತುಗಳು– ಕ್ರಮ ಸಂಖ್ಯೆ: (5) & (6) ನ್ನು ರದ್ದುಪಡಿಸಿದ್ದು, ಅದರಂತೆ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ,
ಮತ್ತು ಅವರ ಹೆಸರಿನಲ್ಲಿ.

(ಬಿ.ಎನ್.ಸುಮತಿ) 13/7
ಸರ್ಕಾರದ ಅಧೀನ ಕಾರ್ಯದರ್ಶಿ–3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1&2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3&9) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿರವರ, ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
9. ಸರ್ಕಾರದ ಜಂಟಿ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
10. ಶಾಖಾ ರಕ್ಷಾಕಡತ / ಹೆಚ್ಚುವರಿ ಪ್ರತಿಗಳು.

25.7.16